ಕರ್ನಾಟಕ ಸರ್ಕಾರ


**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

E-Mail: prydirector.edu.sgkar@nic.in


ಸಂಖ್ಯೆ : ಸಿ7(8):ಪ್ರಾಶಿಅ/ಆರ್.ಟಿ.ಇ/(2017-18)ದಾಖಲಾತಿ/2016-17 ದಿನಾಂಕ: 05-01-2017

: : ಸುತ್ತೋಲೆ : :

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಮಹಾನಗರ ಪಾಲಿಕೆ ವ್ಯಾಪ್ತಿಯ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಶಾಲೆಗಳನ್ನು ಒಂದೇ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮರು ಹೊಂದಾಣಿಕೆ ಮಾಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ : ಇಡಿ 641 ಪಿಜಿಸಿ 2016, ದಿನಾಂಕ:24-12-2016.
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ : ಇಡಿ 641 ಪಿಜಿಸಿ 2016, ದಿನಾಂಕ:31-12-2016.
3. ಈ ಕಛೇರಿ ಪತ್ರದ ಸಂಖ್ಯೆ: ಸಿ7(8)/ಆರ್.ಟಿ.ಇ/ವಾ.ಶಾ.ಹೊಂ/ 2016-17, ದಿನಾಂಕ:16-12-2016 ಮತ್ತು 26-12-2016

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಇತರೆ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿರುವ ಒಂದೇ ವಾರ್ಡ್‌ನಲ್ಲಿರುವ ಶಾಲೆಗಳು ಒಂದು ಅಥವಾ ಅದಕ್ಕಿಂತ ಹೆಚ್ಚು ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಒಳಪಟ್ಟಿರುತ್ತವೆ. ಇದರಿಂದ ವಾರ್ಡ್ ವ್ಯಾಪ್ತಿಯ ಆಡಳಿತದಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳುವುದು ಕಷ್ಟಸಾಧ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಒಂದೇ ವಾರ್ಡ್‌ನಲ್ಲಿರುವ ಶಾಲೆಗಳು ಎರಡು ಅಥವಾ ಅದಕ್ಕಿಂತ ಹೆಚ್ಚು ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆಯಾಗಿರುವುದನ್ನು ರದ್ದುಪಡಿಸಿ ಒಂದು ವಾರ್ಡ್ ವ್ಯಾಪ್ತಿಯಲ್ಲಿನ ಶಾಲೆಗಳನ್ನು ಒಂದು ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮರು ಹಂಚಿಕೆ ಮಾಡುವುದು ಅವಶ್ಯವಾಗಿರುವ ಬಗ್ಗೆ ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಇವರಿಂದ ಸ್ವೀಕರಿಸಲಾದ ಮನವಿಗಳ ಆಧಾರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.

ಉಲ್ಲೇಖ(1) ರ ಮತ್ತು ಉಲ್ಲೇಖ (2)ರ ತಿದ್ದುಪಡಿ ಆದೇಶದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಇತರ ಮಹಾನಗರ ಪಾಲಿಕೆಗಳಲ್ಲಿ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಧಿಕಾರ ವ್ಯಾಪ್ತಿಯ ಆಡಳಿತದಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳಲು ಒಂದೇ ವಾರ್ಡಿನಲ್ಲಿರುವ ಶಾಲೆಗಳು ಎರಡು ಅಥವಾ ಅದಕ್ಕಿಂತ ಹೆಚ್ಚಿನ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆಯಾಗಿರುವುದನ್ನು ರದ್ದುಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಬೆಂಗಳೂರು ಉತ್ತರ ಮತ್ತು ಬೆಂಗಳೂರು ದಕ್ಷಿಣ, ಹುಬ್ಬಳ್ಳಿ ನಗರ, ಹುಬ್ಬಳ್ಳಿ ಗ್ರಾಮಾಂತರ, ಧಾರವಾಡ ನಗರ, ಬಳ್ಳಾರಿ, ಕಲಬುರ್ಗಿ, ದಕ್ಷಿಣ ಕನ್ನಡ ಮತ್ತು ಮೈಸೂರು ಮಹಾನಗರ ಪಾಲಿಕೆಗಳಲ್ಲಿ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳನ್ನು ಒಂದು ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅನುಬಂಧದಲ್ಲಿ ತಿಳಿಸಿರುವಂತೆ ಮರು ಹಂಚಿಕೆ ಮಾಡಿ ಆದೇಶಿಸಿರುತ್ತಾರೆ. (ಸರ್ಕಾರದ ಆದೇಶ ಮತ್ತು ಅನುಬಂಧಗಳನ್ನು ಲಗತ್ತಿಸಿದೆ)

ಸರ್ಕಾರದ ಆದೇಶದಂತೆ ಮರು ಹಂಚಿಕೆ ಮಾಡಿರುವ ಆಯಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ವಾರ್ಡ್‌ನಲ್ಲಿ ಬರುವ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳನ್ನು ತಮ್ಮ ತಮ್ಮ ಯು-ಡೈಸ್‌ನಲ್ಲಿ ವರ್ಗಾಯಿಸಿಕೊಳ್ಳುವುದು ಅಥವಾ ನಿಯಮಾನುಸಾರ ಮರು ಹಂಚಿಕೆ ಮಾಡಿಕೊಳ್ಳುವುದು. ಅಲ್ಲದೇ ಆ ಶಾಲೆಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಆಯಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ವರ್ಗಾಯಿಸುವುದು.

ಈ ಬಗ್ಗೆ ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಇವರು ಮೇಲುಸ್ತುವಾರಿ ಮೂಲಕ ಮರು ಹಂಚಿಕೆ ಮಾಡಲಾದ ವಾರ್ಡ್‌ಗಳಿಗೆ ಅನುಸಾರ ಶಾಲೆಗಳ ದಾಖಲಾತಿಗಳನ್ನು ಮತ್ತು ಯು-ಡೈಸ್‌ನಲ್ಲಿ ಶಾಲೆಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಶಿಕ್ಷಣ ಹಕ್ಕು ಕಾಯಿದೆ ಅಡಿ ದಾಖಲಾತಿ ಪ್ರಕ್ರಿಯೆ ಪ್ರಾರಂಭವಾಗುತ್ತಿರುವುದರಿಂದ ತುರ್ತಾಗಿ ಬದಲಾವಣೆ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

ರವರಿಗೆ,

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಇತರೆ ಮಹಾನಗರ ಪಾಲಿಕೆಗಳ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಇತರೆ ಮಹಾನಗರ ಪಾಲಿಕೆಗಳ ಎಲ್ಲಾ ವಲಯ/ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2. ಆಯುಕ್ತರು, ಮಹಾನಗರ ಪಾಲಿಕೆ, ಹುಬ್ಬಳ್ಳಿ-ಧಾರವಾಡ, ಬಳ್ಳಾರಿ, ಕಲಬುರಗಿ, ಮಂಗಳೂರು ಹಾಗೂ ಮೈಸೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ ಬೆಂಗಳೂರು ರವರ ಮಾಹಿತಿಗಾಗಿ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ, ಧಾರವಾಡ ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
6. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

8. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, 100 ಅಡಿ ರಸ್ತೆ, ಹೊಸಕೆರೆಹಳ್ಳಿ , ಬೆಂಗಳೂರು ಇವರಿಗೆ ಮಾಹಿತಿಗಾಗಿ.
10. ಸಾಪ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್, ಇ-ಗವರ್ನೆನ್ಸ್ ವಿಭಾಗ ಆಯುಕ್ತರ ಕಛೇರಿ ಇವರಿಗೆ ಶಿಕ್ಷಣ ಹಕ್ಕು ಕಾಯಿದೆ ಅಡಿ ದಾಖಲಾತಿಗಾಗಿ ಅಗತ್ಯ ಕ್ರಮವಹಿಸುವುದಕ್ಕಾಗಿ.
11. ಯು-ಡೈಸ್ ವಿಭಾಗ, ಸರ್ವ ಶಿಕ್ಷಣ ಅಭಿಯಾನ ಇವರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳವಾರು ಶಾಲೆಗಳ ಮರು ಹೊಂದಾಣಿಕೆ ಬಗ್ಗೆ ಅಗತ್ಯ ಕ್ರಮವಹಿಸುವುದಕ್ಕಾಗಿ.
12. ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಮಹಾನಗರ ಪಾಲಿಕೆ, ವ್ಯಾಪ್ತಿಯ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಶಾಲೆಗಳನ್ನು ಒಂದೇ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮರು ಹೊಂದಾಣಿಕೆ ಮಾಡುವ ಬಗ್ಗೆ.

**ಓದಲಾಗಿದೆ :-**

1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಏಕ ಕಡತ ಸಂಖ್ಯೆ : ಸಿ7(8)ಆರ್.ಟಿ.ಇ/ವಾ.ಶಾ.ಹೊಂ/2016-17 ದಿನಾಂಕ : 16-12-2016.

* * *

**ಪ್ರಸ್ತಾವನೆ :-**

ಮೇಲೆ ಓದಲಾದ (1)ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಇತರೆ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿರುವ ಒಂದೇ ವಾರ್ಡಿನಲ್ಲಿರುವ ಶಾಲೆಗಳು ಒಂದು ಅಥವಾ ಅದಕ್ಕಿಂತ ಹೆಚ್ಚು ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಧಿಕಾರದ ವ್ಯಾಪ್ತಿಗೆ ಒಳಪಟ್ಟಿರುತ್ತವೆ. ಇದರಿಂದ ವಾರ್ಡ್ ವ್ಯಾಪ್ತಿಯ ಆಡಳಿತದಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳುವುದು ಕಷ್ಟಸಾಧ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಒಂದೇ ವಾರ್ಡ್‌ನಲ್ಲಿರುವ ಶಾಲೆಗಳು ಎರಡು ಅಥವಾ ಅದಕ್ಕಿಂತ ಹೆಚ್ಚು ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆಯಾಗಿರುವುದನ್ನು ರದ್ದುಪಡಿಸಿ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳನ್ನು ಒಂದು ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮರು ಹಂಚಿಕೆ ಮಾಡುವುದು ಅವಶ್ಯಕವಾಗಿರುತ್ತದೆ ಎಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರು ತಮ್ಮ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ರವರ ಪ್ರಸ್ತಾವನೆಯನ್ನು ಕೂಲಕಂಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 641 ಪಿಜಿಸಿ 2016, ಬೆಂಗಳೂರು, ದಿನಾಂಕ : 24-12-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಇತರೆ ಮಹಾನಗರ ಪಾಲಿಕೆಗಳಲ್ಲಿ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಧಿಕಾರ ವ್ಯಾಪ್ತಿಯ ಆಡಳಿತದಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳಲು ಒಂದೇ ವಾರ್ಡಿನಲ್ಲಿರುವ ಶಾಲೆಗಳು ಎರಡು ಅಥವಾ ಅದಕ್ಕಿಂತ ಹೆಚ್ಚಿನ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆಯಾಗಿರುವುದನ್ನು ರದ್ದುಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಬೆಂಗಳೂರು ಉತ್ತರ ಮತ್ತು ಬೆಂಗಳೂರು ದಕ್ಷಿಣ ಹಾಗೂ ಹುಬ್ಬಳ್ಳಿ ನಗರ, ಹುಬ್ಬಳ್ಳಿ ಗ್ರಾಮಾಂತರ, ಧಾರವಾಡ ನಗರ, ಬಳ್ಳಾರಿ, ಕಲಬುರ್ಗಿ, ದಕ್ಷಿಣ ಕನ್ನಡ ಮತ್ತು ಮೈಸೂರು, ಮಹಾನಗರ ಪಾಲಿಕೆಗಳಲ್ಲಿ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳನ್ನು ಒಂದು ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅನುಬಂಧದಲ್ಲಿ ತಿಳಿಸಿರುವಂತೆ ಮರು ಹಂಚಿಕೆ ಮಾಡಿ ಆದೇಶಿಸಿದೆ.

80
28/12/16

27/12/16

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರೇವಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ).

24/12/16

ಇವರಿಗೆ :

1. ಮಹಾಲೇಖಪಾಲರು, (ಎ & ಇ) ಪಾರ್ಕ್‌ಹೌಸ್, ರಸ್ತೆ, ಬೆಂಗಳೂರು - 560 001.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು - 560 001.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.

4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5. ನಿರ್ದೇಶಕರು, (ಪ್ರೌಢ ಶಿಕ್ಷಣ / ಪ್ರಾಥಮಿಕ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಹುಬ್ಬಳ್ಳಿ ನಗರ, ಹುಬ್ಬಳ್ಳಿ ಗ್ರಾಮಾಂತರ, ಧಾರವಾಡ ನಗರ, ಬಳ್ಳಾರಿ, ಕಲಬುರಗಿ, ದಕ್ಷಿಣ ಕನ್ನಡ ಮತ್ತು ಮೈಸೂರು.
7. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು (ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಖಾಂತರ)
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

# ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ ಇಡಿ 641 ಪಿಜಿಸಿ 2016

## ಬಿ.ಬಿ.ಎಂಪಿ ಮತ್ತು ಮಹಾನಗರ ಪಾಲಿಕೆಗಳು

| ಕ್ರ ಸಂ | ಜಿಲ್ಲೆಯ ಹೆಸರು | ವಲಯ/ ತಾಲ್ಲೂಕು | ಒಂದಕ್ಕಿಂತ ಹೆಚ್ಚು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆ ಯಾಗಿರುವ ವಾರ್ಡ್ ಸಂಖ್ಯೆ | ಮರು ಹಂಚಿಕೆ ಸೇರಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಬರುವ ಒಟ್ಟು ವಾರ್ಡ್‌ಗಳ ಸಂಖ್ಯೆ |
|---|---|---|---|---|
| 1 | ಬೆಂಗಳೂರು ಉತ್ತರ | ಬೆಂಗಳೂರು ಉತ್ತರ ವಲಯ-1 | 12, 13, 14, 38, 73, 129, 130 | 13, 38, 39, 40, 41, 42, 43, 44, 67, 68, 69, 70, 71, 72, 73, 74, 75, 99, 100, 101, 102, 105, 106, 107, 108, |
| | | ಬೆಂಗಳೂರು ಉತ್ತರ ವಲಯ-2 | 8, 10, 20, 33, 38, 93 | 16, 17, 18, 19, 21, 22, 35, 36, 37, 45, 64, 65, 66, 76, 77, 94, 95, 96, 97, 98. |
| | | ಬೆಂಗಳೂರು ಉತ್ತರ ವಲಯ-3 | 20, 23, 24, 33, 57, 93, 110 | 20, 27, 28, 29, 30, 31, 32, 33,34, 46, 47, 48, 49, 50, 59, 60, 61, 62, 63, 78, 79, 80, 90, 91, 92, 93, 110 |
| | | ಬೆಂಗಳೂರು ಉತ್ತರ ವಲಯ-4 | 6, 8, 10, 12, 13, 14, 23, 24, | 1, 2, 3, 4, 5, 7, 8, 9, 10, 11, 12, 14, 15, 23, 24. |
| 2 | ಬೆಂಗಳೂರು ದಕ್ಷಿಣ | ಬೆಂಗಳೂರು ದಕ್ಷಿಣ ವಲಯ-1 | 73, 129, 130, 143, 153, 157, 158, 166, 167, 177, 179, 195, 196, 197, | 129, 130, 142, 153, 154, 155, 156, 158, 159, 160, 161, 162, 163, 164, 165, 177, 178, 180, 181, 182, 183, 184, 185, 197, 198. |
| | | ಬೆಂಗಳೂರು ದಕ್ಷಿಣ ವಲಯ-2 | 110, 118, 145, 157, 158 | 103, 104, 109, 118, 119, 120, 121, 122, 123, 124, 125, 126, 127, 128, 131, 132, 133, 134, 135, 136, 137, 138, 139, 140, 141, 157, |
| | | ಬೆಂಗಳೂರು ದಕ್ಷಿಣ ವಲಯ-3 | 118, 143, 145, 153, 166, 167, 177, 179, 191, 195, 196, 197 | 89, 111, 112, 114, 115, 116, 117, 143, 144, 145, 146, 147, 148, 151, 152, 166, 167, 168, 169, 170, 171, 172, 173, 174, 175, 176, 179, 186, 187, 188, 189, 190, 191, 192, 193, 194, 195, 196 |
| | | ಬೆಂಗಳೂರು ದಕ್ಷಿಣ ವಲಯ-4 | 6, 57 | 6, 25, 26, 51, 52, 53, 54, 55, 56, 57, 58, 81, 82, 83, 84, 85, 86, 87, 88, 113, 149, 150, |
| | | ಆನೇಕಲ್ | 191 | - |
| | | ಧಾರವಾಡ ಸಿಟಿ | 1 ರಿಂದ 22 | 1 ರಿಂದ 22, |
| 2 | ಧಾರವಾಡ | ಹುಬ್ಬಳ್ಳಿ ಗ್ರಾಮಾಂತರ | 22, 23, 24, 25 | 23, 24, 25, |
| | | ಹುಬ್ಬಳ್ಳಿ ನಗರ | 26, 30, 37 | 26, 27, 29, 30, 35, 37, 28, 31, 32, 33, 34, 36, 38, 39, 40, 41, 42, 43, 44, 45, 46, 47, 48, 49, 50, 51, 52, 53, 54, 55, 56, 57, 58, 59, 60, 61, 62, 63, 64, 65, 66, 67 |

| | | | | |
|---|---|---|---|---|
| 3 | ಬಳ್ಳಾರಿ | ಬಳ್ಳಾರಿ ಪೂರ್ವ | 1, 5, 22 | 2, 3, 4, 5, 6, 7, 8, 9, 10, 11 ,12, 13, 14, 15, 17, |
| | | ಬಳ್ಳಾರಿ ಪಶ್ಚಿಮ | 1, 5, 22 | 1, 16, 18, 19, 20, 21, 22, 23, 24, 25, 26, 27, 28, 29, 30, 31, 32, 33, 34, 35, |
| 4 | ಕಲಬುರಗಿ | ಕಲಬುರಗಿ ಉತ್ತರ | 1, 10, 21, 23, 30, 33 | 1 ರಿಂದ 32, |
| | | ಕಲಬುರಗಿ ದಕ್ಷಿಣ | 33, 37, 46 | 33 ರಿಂದ 35 |
| 5 | ದಕ್ಷಿಣ ಕನ್ನಡ | ಮಂಗಳೂರು ಉತ್ತರ ವಲಯ | 1 ರಿಂದ 19, | 1, 2, 3, 4, 5, 6, 7, 8, 9, 10, 11, 12, 13, 14, 15, 16, 17, 18, 19, 23, 24, 25, 26, 27, 28, 29, 40, 41, 42, 43, 44, 45, 60 |
| | | ಮಂಗಳೂರು ದಕ್ಷಿಣ ವಲಯ | | 20, 21, 22, 30, 31, 32, 33, 34, 35, 36, 37, 38, 39, 46, 47, 48, 49, 50, 51, 52, 53, 54, 55, 56, 57, 58, 59 |
| 6 | ಮೈಸೂರು | ಮೈಸೂರು ಉತ್ತರ ವಲಯ | 12, 13 ,23, 24 25, 26, 29, 46, 53, 56 | 23 , 25, 26, 27, 28, 30, 31, 32, 33, 34, 35, 37, 38, 39, 40, 41, 42, 43, 44, 45, 46, 47, 48, 49, 50, 51, 52, 53, 54, 55, 56, 57, 58, 59, 60, 61, 62, 64 |
| | | ಮೈಸೂರು ದಕ್ಷಿಣ ವಲಯ | 12, 13 ,23, 24 25, 26, 29, 46, 53, 56 | 1, 2, 3, 4, 5, 6, 7, 8, 9, 10, 11, 12, 13, 14, 15, 16, 17, 18, 19, 20, 21, 22, 24, 36, 63, 65 |
| | | ಮೈಸೂರು ಗ್ರಾಮಾಂತರ ವಲಯ | 12, 13 ,23, 24 25, 26, 29, 46, 53, 56 | 29, |

(ರೇವಯ್ಯ)
ಸರ್ಕಾರದ ಅಧೀನಕಾರ್ಯದರ್ಶಿ
ಶಿಕ್ಷಣ ಇಲಾಖೆ(ಪ್ರಾಥಮಿಕ)

## ಕರ್ನಾಟಕ ಸರ್ಕಾರ

ಸಂಖ್ಯೆ : ಇಡಿ 641 ಪಿಜಿಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 31-12-2016

**ತಿದ್ದುಪಡಿ**

ವಿಷಯ : ಬಿಬಿಎಂಪಿ. ಮಹಾನಗರ ಪಾಲಿಕೆ ಮತ್ತು ನಗರ ಸಭೆ ವ್ಯಾಪ್ತಿಯಲ್ಲಿ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಶಾಲೆಗಳನ್ನು ಒಂದೇ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮರು ಹೊಂದಾಣಿಕೆ ಮಾಡುವ ಬಗ್ಗೆ

ಉಲ್ಲೇಖ : ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ 7(8)/ಆರ್.ಟಿ.ಇ./ವಾ.ಶಾ.ಹೊಂ/2016-17, ದಿನಾಂಕ : 26-12-2016.

* * * * *

ಸರ್ಕಾರದ ಆದೇಶ ಸಂಖ್ಯೆ : ಇಡಿ. 641 ಪಿಜಿಸಿ 2016 ದಿನಾಂಕ : 24-12-2016ರ ಆದೇಶದಲ್ಲಿನ ಅನುಬಂಧದಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

**ಅನುಬಂಧ**

| ಕ್ರ.ಸಂ. | ಜಿಲ್ಲೆಯ ಹೆಸರು | ವಲಯ/ ತಾಲ್ಲೂಕು | ಒಂದಕ್ಕಿಂತ ಹೆಚ್ಚು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆಯಾಗಿರುವ ವಾರ್ಡ್ ಸಂಖ್ಯೆ | ಮರು ಹಂಚಿಕೆ ಸೇರಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಬರುವ ಒಟ್ಟು ವಾರ್ಡ್‌ಗಳ ಸಂಖ್ಯೆ |
|---|---|---|---|---|
| 4. | ಕಲಬುರಗಿ | ಕಲಬುರಗಿ ದಕ್ಷಿಣ | | 33 ರಿಂದ 55 |
| 5. | ದಕ್ಷಿಣ ಕನ್ನಡ | ಮಂಗಳೂರು ಉತ್ತರ ವಲಯ | 30, 40, | 22, 31 ನ್ನು ದಕ್ಷಿಣ ವಲಯದಿಂದ ಹೊರತುಪಡಿಸಿ ಉತ್ತರ ವಲಯಕ್ಕೆ ಸೇರಿಸಿದೆ. |
| | | ಮಂಗಳೂರು ದಕ್ಷಿಣ ವಲಯ | 30, 40 | 22, 31 ತೆಗೆದುಹಾಕಲಾಗಿದೆ |

ತಮ್ಮ ನಂಬುಗೆಯ,

(ರೇವಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

31/12/16

ಇವರಿಗೆ :

1. ಮಹಾಲೇಖಪಾಲರು (ಎ & ಇ), ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು-560 001.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560 001.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5. ನಿರ್ದೇಶಕರು (ಪ್ರೌಢಶಿಕ್ಷಣ / ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಹುಬ್ಬಳ್ಳಿ ನಗರ, ಹುಬ್ಬಳ್ಳಿ ಗ್ರಾಮಾಂತರ, ಧಾರವಾಡ ನಗರ, ಬಳ್ಳಾರಿ, ಕಲಬುರಗಿ, ದಕ್ಷಿಣ ಕನ್ನಡ ಮತ್ತು ಮೈಸೂರು.
7. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು (ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಖಾಂತರ).
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು

**ಕರ್ನಾಟಕ ಸರ್ಕಾರ**

ಸಂಖ್ಯೆ : ಇಡಿ 641 ಪಿಜಿಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 02-02-2017

**ತಿದ್ದುಪಡಿ**

ವಿಷಯ : ಬಿ.ಬಿ.ಎಂ.ಪಿ. ಮಹಾನಗರ ಪಾಲಿಕೆ ಮತ್ತು ನಗರ ಸಭೆ ವ್ಯಾಪ್ತಿಯಲ್ಲಿ ಒಂದು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಶಾಲೆಗಳನ್ನು ಒಂದೇ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮರು ಹೊಂದಾಣಿಕೆ ಮಾಡುವ ಬಗ್ಗೆ.

ಉಲ್ಲೇಖ : ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ 7(8)/ಆರ್.ಟಿ.ಇ./ವಾ.ಶಾ.ಹೊಂ/2016-17, ದಿನಾಂಕ ; 16-01-2017.

* * * * *

ಸರ್ಕಾರದ ಆದೇಶ ಸಂಖ್ಯೆ : ಇಡಿ. 641 ಪಿಜಿಸಿ 2016 ದಿನಾಂಕ : 24-12-2016ರ ಆದೇಶದಲ್ಲಿನ ಅನುಬಂಧದಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

ಅನುಬಂಧ

| ಜಿಲ್ಲೆಯ ಹೆಸರು | ವಲಯ/ ತಾಲ್ಲೂಕು | ಒಂದಕ್ಕಿಂತ ಹೆಚ್ಚು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಂಚಿಕೆಯಾಗಿರುವ ವಾರ್ಡ್ ಸಂಖ್ಯೆ | ಮರು ಹಂಚಿಕೆ ಸೇರಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಬರುವ ಒಟ್ಟು ವಾರ್ಡ್‌ಗಳ ಸಂಖ್ಯೆ |
|---|---|---|---|
| ಬಳ್ಳಾರಿ ಜಿಲ್ಲೆ | ಬಳ್ಳಾರಿ ಪೂರ್ವ ವಲಯ | 1, 5, 22 | 2 ರಿಂದ 21 |
| | ಬಳ್ಳಾರ ಪಶ್ಚಿಮ ವಲಯ | 1, 5, 22 | 1, 22 ರಿಂದ 35 |

(ರೇವಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

ಇವರಿಗೆ :

1. ಮಹಾಲೇಖಪಾಲರು (ಎ & ಇ), ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು-560 001.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560 001.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
4. ನಿರ್ದೇಶಕರು (ಪ್ರೌಢಶಿಕ್ಷಣ / ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬಳ್ಳಾರಿ ಜಿಲ್ಲೆ
6. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು (ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಖಾಂತರ).
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು